ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪ್ರಥಮ ಪ್ರಯತ್ನದಲ್ಲಿ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಮಂಜೂರು ಮಾಡುವ ಬಗ್ಗೆ

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: SWL / 288 / SEW /1978, ದಿನಾಂಕ: 30-05-1981
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಕನಿ/ಇಡಿ-7/ಸಿಆರ್-17/2013-14, ದಿನಾಂಕ:09-04-2015.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಕನಿ:ಇಡಿ-1:ಸಿಆರ್ :2015-16, ದಿನಾಂಕ:20-05-2015.

14/8/2015

*****

ಪ್ರಸ್ತಾವನೆ:

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ದಿನಾಂಕ:30-05-1981 ರ ಸರ್ಕಾರದ ಆದೇಶದಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಈ ಕೆಳಗಿನಂತೆ ಬಹುಮಾನ ಹಣ ಮಂಜೂರು ಮಾಡಲು ಆದೇಶಿಸಲಾಗಿದೆ. ಈ ಕಾರ್ಯಕ್ರಮವನ್ನು ಪರಿಶಿಷ್ಟ ಜಾತಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಜಿಲ್ಲಾ ವಲಯದ ಯೋಜನೆ ಮತ್ತು ಯೋಜನೇತರ ಲೆಕ್ಕ ಶೀರ್ಷಿಕೆ 2225-00-101-0-37 (ಕಾಲೇಜು ವಿದ್ಯಾರ್ಥಿಗಳಿಗೆ ಪುರಸ್ಕಾರ, ಇತರೆ ರಿಯಾಯಿತಿಗಳು, ಶ್ರೇಷ್ಠತೆ ಪಡೆದ ಪ.ಜಾತಿಯ ವಿದ್ಯಾರ್ಥಿಗಳಿಗೆ ಸಹಾಯ) ಮತ್ತು ಪರಿಶಿಷ್ಟ ಪಂಗಡ ಕಲ್ಯಾಣಕ್ಕೆ ಸಂಬಂಧಿಸಿದಂತೆ ಜಿಲ್ಲಾ ವಲಯದ ಯೋಜನೆ ಮತ್ತು ಯೋಜನೇತರ ಲೆಕ್ಕ ಶೀರ್ಷಿಕೆ:2225-00-102-0-38 (ವಿದ್ಯಾರ್ಥಿ ನಿಲಯಗಳ ಮತ್ತು ಧನ ಸಹಾಯ) ಕಾರ್ಯಕ್ರಮವಡಿ ಅನುಷ್ಠಾನಗೊಳಿಸಲಾಗುತ್ತಿದೆ.

ಕಾರ್ಯಕ್ರಮದ ವಿವರ	ಬಹುಮಾನ ಹಣದ ಮೊತ್ತ (ಪ್ರತಿ ವಿದ್ಯಾರ್ಥಿಗೆ ರೂ.ಗಳಲ್ಲಿ)
II PUC	Rs.750/- as Prize
Degree	Rs.1000/- as Prize
Post Graduate Course like MA, M.Sc., etc.	Rs.1250/- as Prize
Agriculture/Engineering/Medicine/Veterinary	Rs.1500/- as Prize

ಮೇಲೆ ಕ್ರಮಾಂಕ (2) ಮತ್ತು (3) ರಲ್ಲಿ ಓದಲಾದ ದಿನಾಂಕ:09-4-2015 ಮತ್ತು 20-05-2015 ರ ಪತ್ರಗಳಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಮತ್ತು ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರು 2015-16 ನೇ ಸಾಲಿನ ಆಯವ್ಯಯ ಘೋಷಣೆಯ ಕ್ರಮ ಸಂಖ್ಯೆ: 197 ರಲ್ಲಿ ವಿವರಿಸಿರುವಂತೆ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮೇಲೆ ವಿವರಿಸಿರುವ ಬಹುಮಾನ ಹಣದ ಮೊತ್ತವನ್ನು ಈ ಕೆಳಗಿನಂತೆ ಹೆಚ್ಚಿಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಕಾರ್ಯಕ್ರಮದ ವಿವರ	ಬಜೆಟ್‌ಘೋಷಣೆಯಂತೆ ಹೆಚ್ಚಿಸಬೇಕಾದ ಮೊತ್ತ (ರೂ ಗಳಲ್ಲಿ)
II PUC	20,000/-
Degree	25,000/-
Post Graduate Course like MA, M.Sc., M.Com.,MBA., MCA., MFA., etc.	30,000/-
Agriculture/Engineering/Medicine/Veterinary	35,000/-

ಬಹುಮಾನ ಹಣದ ಹೆಚ್ಚಳದಿಂದ ತಗುಲುವ ಹೆಚ್ಚುವರಿ ವೆಚ್ಚವನ್ನು ಪರಿಶಿಷ್ಟ ಜಾತಿ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ 2015-16ನೇ ಸಾಲಿನಲ್ಲಿ ರಾಜ್ಯವಲಯದ ಯೋಜನಾ ಲೆಕ್ಕ ಶೀರ್ಷಿಕೆ:2225-01-800-0-19 (ಪರಿಶಿಷ್ಟ ಜಾತಿಯವರಿಗೆ ವಿವಿಧ ಅಭಿವೃದ್ಧಿ ಯೋಜನೆ) ರಡಿ ಅನುದಾನ ಒದಗಿಸಿಕೊಂಡು ಅನುಷ್ಠಾನಗೊಳಿಸಲು ಮತ್ತು

--2)

2016-17 ನೇ ಸಾಲಿನಿಂದ ಜಿಲ್ಲಾವಲಯದ ಯೋಜನೆ ಮತ್ತು ಯೋಜನೇತರ ಲೆಕ್ಕ ಶೀರ್ಷಿಕೆ: 2225-00-101-0-3 (ಕಾಲೇಜು ವಿದ್ಯಾರ್ಥಿಗಳಿಗೆ ಪುರಸ್ಕಾರ, ಇತರೆ ರಿಯಾಯಿತಿಗಳು, ಶ್ರೇಷ್ಠತೆ ಪಡೆದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳ ಸಹಾಯ) ರಡಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ 2015-16ನೇ ಸಾಲಿನಲ್ಲಿ ರಾಜ್ಯವಲಯ ಯೋಜನಾ ಲೆಕ್ಕ ಶೀರ್ಷಿಕೆ:2225-02-800-0-06 (ಪರಿಶಿಷ್ಟ ಪಂಗಡದವರಿಗೆ ವಿವಿಧ ಅಭಿವೃದ್ಧಿ ಯೋಜನೆ) ರಡಿ ಅನುದಾನ ಒದಗಿಸಿಕೊಂಡು ಅನುಷ್ಠಾನಗೊಳಿಸಲು ಮತ್ತು 2016-17 ನೇ ಸಾಲಿನಿಂದ ಜಿಲ್ಲಾ ವಲಯದ ಯೋಜನೆ ಮತ್ತ ಯೋಜನೇತರ ಲೆಕ್ಕ ಶೀರ್ಷಿಕೆ:2225-00-102-0-38 (ವಿದ್ಯಾರ್ಥಿ ನಿಲಯಗಳ ಮತ್ತು ಧನ ಸಹಾಯ) ರಡಿ ಅನುದಾನ ಒದಗಿಸಿಕೊಂಡು ಕಾರ್ಯಕ್ರಮ ಅನುಷ್ಠಾನಗೊಳಿಸಲು ಸರ್ಕಾರದಿಂದ ಸೂಕ್ತ ಆದೇಶ ಹೊರಡಿಸಲು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಮತ್ತು ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆರವರು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯಂತೆ ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಸಕಇ 174 ಪಕವಿ 2015, ಬೆಂಗಳೂರು, ದಿನಾಂಕ: 10-08-2015

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ 2015-16 ನೇ ಸಾಲಿನ ಆಯವ್ಯಯ ಘೋಷಣೆಯ ಕ್ರಮ ಸಂಖ್ಯೆ: 197 ರಲ್ಲಿ ವಿವರಿಸಿರುವಂತೆ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಹಾಲಿ ನೀಡುತ್ತಿರುವ ಬಹುಮಾನ ಹಣವನ್ನು ಈ ಕೆಳಗಿನಂತೆ ಹೆಚ್ಚಿಸಿ ಆದೇಶಿಸಲಾಗಿದೆ.

ಕಾರ್ಯಕ್ರಮದ ವಿವರ	ಬಹುಮಾನ ಹಣದ ಮೊತ್ತ (ರೂ ಗಳಲ್ಲಿ)
II PUC	20,000/-
Degree	25,000/-
Post Graduate Course like MA, M.Sc., M.Com.,MBA., MCA., MFA., etc.	30,000/-
Agriculture/Engineering/Medicine/Veterinary	35,000/-

ಬಹುಮಾನ ಹಣದ ಪರಿಷ್ಕರಣೆಯಿಂದ ತಗುಲುವ ಹೆಚ್ಚುವರಿ ವೆಚ್ಚವನ್ನು 2015-16ನೇ ಸಾಲಿನಲ್ಲಿ **ಸಮಾಜ ಕಲ್ಯಾಣ ಇಲಾಖೆಯ** ರಾಜ್ಯವಲಯದ ಯೋಜನಾ ಲೆಕ್ಕ ಶೀರ್ಷಿಕೆ:2225-01-800-0-19 (ಪರಿಶಿಷ್ಟ ಜಾತಿಯವರಿಗೆ ವಿವಿಧ ಅಭಿವೃದ್ಧಿ ಯೋಜನೆ) ರಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಅನುಷ್ಠಾನಗೊಳಿಸಲು ಮತ್ತು 2016-17 ನೇ ಸಾಲಿನಿಂದ ಜಿಲ್ಲಾವಲಯದ ಯೋಜನೆ ಮತ್ತು ಯೋಜನೇತರ ಲೆಕ್ಕ ಶೀರ್ಷಿಕೆ: 2225-00-101-0-37 (ಕಾಲೇಜು ವಿದ್ಯಾರ್ಥಿಗಳಿಗೆ ಪುರಸ್ಕಾರ, ಇತರೆ ರಿಯಾಯಿತಿಗಳು, ಶ್ರೇಷ್ಠತೆ ಪಡೆದ ಪ.ಜಾತಿಯ ವಿದ್ಯಾರ್ಥಿಗಳಿಗೆ ಸಹಾಯ) ರಡಿ ಮತ್ತು **ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗೆ** ಸಂಬಂಧಿಸಿದಂತೆ 2015-16ನೇ ಸಾಲಿನಲ್ಲಿ ರಾಜ್ಯವಲಯದ ಯೋಜನಾ ಲೆಕ್ಕ ಶೀರ್ಷಿಕೆ:2225-02-800-0-06 (ಪರಿಶಿಷ್ಟ ಪಂಗಡದವರಿಗೆ ವಿವಿಧ ಅಭಿವೃದ್ಧಿ ಯೋಜನೆ) ರಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಅನುಷ್ಠಾನಗೊಳಿಸಲು ಮತ್ತು 2016-17 ನೇ ಸಾಲಿನಿಂದ ಜಿಲ್ಲಾವಲಯದ ಯೋಜನೆ ಮತ್ತು ಯೋಜನೇತರ ಲೆಕ್ಕ ಶೀರ್ಷಿಕೆ ಯೋಜನೇತರ ಲೆಕ್ಕ ಶೀರ್ಷಿಕೆ:2225-00-102-0-38 (ವಿದ್ಯಾರ್ಥಿ ನಿಲಯಗಳ ಮತ್ತು ಧನ ಸಹಾಯ) ರಡಿ ಅನುದಾನ ಒದಗಿಸಿಕೊಂಡು ಕಾರ್ಯಕ್ರಮ ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

ಈ ಬಹುಮಾನದ ಹಣವನ್ನು ಪಡೆಯಲು ವಿದ್ಯಾರ್ಥಿಗಳಿಗೆ ಇರಬೇಕಾದ ಅರ್ಹತೆಗಳು:

1. ವಿದ್ಯಾರ್ಥಿಗಳು ದ್ವಿತೀಯ/ಅಂತಿಮ ವರ್ಷದ ಪಿ.ಯು.ಸಿ ಯನ್ನು ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಪಾಸಾಗಿರಬೇಕು. ಸಿ.ಬಿ.ಎಸ್.ಇ ಮತ್ತು ಐ.ಸಿ.ಎಸ್.ಇ ವತಿಯಿಂದ ನಡೆಸಲಾಗುವ 12 ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆಯಾದವರೂ ಸಹಾ ಈ ಯೋಜನೆಯಡಿ ಬಹುಮಾನ ಹಣ ಪಡೆಯಲು ಅರ್ಹರಿರುತ್ತಾರೆ.
2. ಪದವಿ /ಸ್ನಾತಕೋತ್ತರ ಪದವಿ / ಕೃಷಿ / ಪಶುಸಂಗೋಪನೆ / ಇಂಜಿನಿಯರಿಂಗ್ / ಮೆಡಿಕಲ್ ಕೋರ್ಸುಗಳಿಗೆ ಸಂಬಂಧಿಸಿದಂತೆ ಪ್ರತಿ ವರ್ಷ ಪಬ್ಲಿಕ್ ಪರೀಕ್ಷೆ ಇದ್ದಲ್ಲಿ ಪ್ರತಿ ವರ್ಷವೂ ಪ್ರಥಮ ಪ್ರಯತ್ನದಲ್ಲಿ ಪಾಸಾಗಿರಬೇಕು

--3

ಮತ್ತು ಅಂತಿಮವಾಗಿ ಪ್ರಥಮ ದರ್ಜೆಯಲ್ಲಿ ಪಾಸಾಗಿರಬೇಕು. ಈ ಕೋರ್ಸುಗಳಿಗೆ ಸೆಮಿಸ್ಟರ್ ಪದ್ಧತಿ ಇದ್ದಲ್ಲಿ ಎಲ್ಲಾ ಸೆಮಿಸ್ಟರ್‌ಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪಾಸಾಗಿರಬೇಕು ಮತ್ತು ಅಂತಿಮವಾಗಿ ಪ್ರಥಮ ದರ್ಜೆಯಲ್ಲಿ ಪಾಸಾಗಿರಬೇಕು. ಈ ಎರಡು ಕೋರ್ಸುಗಳಲ್ಲಿ ಪ್ರತಿ ವರ್ಷದ ಪರೀಕ್ಷೆ ಅಥವಾ ಸೆಮಿಸ್ಟರ್‌ಗಳಲ್ಲಿ compartmental / carry over system ರಡಿ ಪಾಸಾಗಿದ್ದರೆ ಅಂತಹವರು ಬಹುಮಾನ ಹಣ ಪಡೆಯಲು ಅರ್ಹರಿರುವುದಿಲ್ಲ.

3. ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಮೇಲ್ಕಂಡ ಕೋರ್ಸುಗಳನ್ನು ಹೊರ ರಾಜ್ಯಗಳಲ್ಲಿ ವ್ಯಾಸಂಗ ಮಾಡಿದ್ದರೂ ಸಹಾ ಅರ್ಹರಾಗಿರುತ್ತಾರೆ. ಆದರೆ ಹೊರ ದೇಶಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಈ ಯೋಜನೆಯಡಿ ಬಹುಮಾನ ಹಣ ಪಡೆಯಲು ಅರ್ಹರಲ್ಲ.
4. ರಾಜ್ಯ / ಕೇಂದ್ರ ಸರ್ಕಾರದಿಂದ ಮಾನ್ಯತೆ ಪಡೆದ ವಿಶ್ವ ವಿದ್ಯಾಲಯ / ಯು.ಜಿ.ಸಿ ಯಿಂದ ಮಾನ್ಯತೆ ಪಡೆದ ಡೀಮ್ಡ್ ವಿಶ್ವ ವಿದ್ಯಾಲಯ ಗಳಡಿ ಬರುವ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡಿದ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಸ್ವಾಯುತ್ತ (Autonomous) ವಿದ್ಯಾಸಂಸ್ಥೆಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಈ ಯೋಜನೆಗೆ ಅರ್ಹರಿರುತ್ತಾರೆ.
5. ಸರ್ಕಾರದಿಂದ ಮಾನ್ಯತೆ ಪಡೆಯದಿರುವ ವಿದ್ಯಾ ಸಂಸ್ಥೆಗಳಲ್ಲಿ ವ್ಯಾಸಾಂಗ ಮಾಡಿದ ವಿದ್ಯಾರ್ಥಿಗಳು ಈ ಯೋಜನೆಯಡಿ ಅರ್ಹರಿರುವುದಿಲ್ಲ.

ಮಂಜೂರಾತಿ ವಿಧಾನ

1. ಈ ಯೋಜನೆಗೆ ಅರ್ಜಿಗಳನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಹಾಗೂ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ/ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ ಇವರು ಆನ್ ಲೈನ್ ಮೂಲಕ ಆಹ್ವಾನಿಸಬೇಕು.
2. ಸದರಿ ಅಧಿಕಾರಿಗಳು ಆನ್ ಲೈನ್‌ನಲ್ಲಿ ಸ್ವೀಕೃತವಾದ ಎಲ್ಲಾ ಅರ್ಜಿಗಳನ್ನು ಪರಿಶೀಲಿಸಿ, ಅರ್ಹ ವಿದ್ಯಾರ್ಥಿಗಳ ಪಟ್ಟಿ ತಯಾರಿಸಿ ಈ ಕೆಳಕಂಡ ಸಮಿತಿಯಲ್ಲಿ ಮಂಡಿಸಿ ಅನುಮೋದನೆ ಪಡೆದು, ಬಹುಮಾನದ ಹಣ ಮಂಜೂರು ಮಾಡುವ ಬಗ್ಗೆ ಆದೇಶ ಹೊರಡಿಸಬೇಕು.
3. ಜಿಲ್ಲಾ ಸಮಿತಿ:

1. ಜಿಲ್ಲಾಧಿಕಾರಿಗಳು	- ಅಧ್ಯಕ್ಷರು
2.ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು	- ಸಹ ಅಧ್ಯಕ್ಷರು
3.ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ	- ಸದಸ್ಯರು
4. ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ /ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ	- ಸದಸ್ಯರು
5.ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು	- ಸದಸ್ಯ ಕಾರ್ಯದರ್ಶಿ

ಸಮಿತಿಯು ಇಚ್ಚಿಸಿದಲ್ಲಿ ಸಂಬಂಧಿಸಿದ ಇತರೇ ಇಲಾಖೆಯ ಅಧಿಕಾರಿಗಳನ್ನು ಸಮಿತಿ ಸಭೆಗೆ ಆಹ್ವಾನಿಸಬಹುದು.

4. ವಿದ್ಯಾರ್ಥಿಯು ವ್ಯಾಸಂಗ ಮಾಡಿದ ಶೈಕ್ಷಣಿಕ ಸಂಸ್ಥೆ ಯಾವ ಜಿಲ್ಲೆಯಲ್ಲಿ ಇರುತ್ತದೆಯೋ ಅದೇ ಜಿಲ್ಲೆಯ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ / ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ/ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ ಇವರಿಗೆ ಅರ್ಜಿ ಸಲ್ಲಿಸಬೇಕು
5. ಹೊರ ರಾಜ್ಯಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು Native District ನಲ್ಲಿ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.
6. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಅವರ ಶೈಕ್ಷಣಿಕ ಮಟ್ಟವನ್ನು ಹೆಚ್ಚಿಸಿಕೊಳ್ಳಲು ಪ್ರೋತ್ಸಾಹಿಸಲು ಅನುಕೂಲವಾಗುವಂತೆ ಈ ಬಹುಮಾನ ಹಣ ನೀಡುತ್ತಿರುವುದರಿಂದ ಬಹುಮಾನ ಹಣದ ಮಂಜೂರಾತಿ ಆದೇಶಗಳನ್ನು ವಿದ್ಯಾರ್ಥಿಗಳಿಗೆ ಜಿಲ್ಲಾ / ತಾಲೂಕು ಮಟ್ಟದಲ್ಲಿ ನಡೆಯುವ ಡಾ॥ಬಿ.ಆರ್.ಅಂಬೇಡ್ಕರ್ ಜಯಂತಿ / ಡಾ.ಬಾಬು ಜಗಜೀವನರಾಮ್ ಜಯಂತಿ/ ವಾಲ್ಮೀಕಿ ಜಯಂತಿ / ಸ್ವಾತಂತ್ರ ದಿನಾಚರಣೆ / ಗಣರಾಜ್ಯೋತ್ಸವ ದಿನಾಚರಣೆ / ಕನ್ನಡ ರಾಜ್ಯೋತ್ಸವ ಹಾಗೂ ಇನ್ನಿತರೇ ಕಾರ್ಯಕ್ರಮಗಳಲ್ಲಿ ವಿತರಿಸತಕ್ಕದ್ದು ಮತ್ತು ಈ ಬಹುಮಾನದ ಹಣವನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ RTGS/NEFT ಮೂಲಕ ಜಮೆ ಮಾಡತಕ್ಕದ್ದು.

7. ವಿದ್ಯಾರ್ಥಿಗಳಿಗೆ ಬಹುಮಾನದ ಹಣವನ್ನು ಒಂದೇ ಕಂತಿನಲ್ಲಿ ಪೂರ್ಣವಾಗಿ ಬಿಡುಗಡೆ ಮಾಡತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 464 ವೆಚ್ಚ-3/2015, ದಿನಾಂಕ:12-06-2015 ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 71 ಇಎಂಎಂ 2015, ದಿನಾಂಕ: 27-07-2015 ರಂದು ನೀಡಿರುವ ಸಹಮತಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

10/8/2015
(ಗಿರಿಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಸಮಾಜಕಲ್ಯಾಣ ಇಲಾಖೆ.

ಗೆ:

1. ಮಹಾಲೇಖಪಾಲರು, (ಲೆಕ್ಕಪತ್ರ/ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
4. ನಿರ್ದೇಶಕರು, ರಾಜ್ಯ ಹುಜೂರ್‌ಖಜಾನೆ, ಖನಿಜ ಭವನ, ಬೆಂಗಳೂರು.
5. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
6. ಎಲ್ಲಾ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು } (ಆಯುಕ್ತರು, ಸಮಾಜ ಕಲ್ಯಾಣ ಇವರ ಮುಖಾಂತರ)
7. ಎಲ್ಲಾ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ/ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ (ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು. ಇವರ ಮುಖಾಂತರ)
8. ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿ.

ರವಾನಿಸಿದೆ
ದಿನಾಂಕ 03/9/15
ಬೆಂಗಳೂರು

ಪ್ರತಿ ಇವರಿಗೆ:

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ನಿದೇಶಕರು, ಪಿಎಂಐ ವಿಭಾಗ, ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು (ಟಿಪ್ಪಣಿ ಸಂಖ್ಯೆ:ಪಿಡಿ 71 ಇಎಂಎಂ 2015, ದಿನಾಂಕ:27-07-2015 ರ ಮಾಹಿತಿಗಾಗಿ)
3. ಸರ್ಕಾರದ ಅಧೀನ ಕಾರ್ಯದರ್ಶಿ, (ವೆಚ್ಚ 3&9) ಆರ್ಥಿಕ ಇಲಾಖೆ, ವಿಧಾನಸೌಧ, (ಟಿಪ್ಪಣಿ ಸಂಖ್ಯೆ: ಆಇ 464 ವೆಚ್ಚ-3/2015, ದಿನಾಂಕ:12-6-2015 ರ ಮಾಹಿತಿಗಾಗಿ)
4. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
5. ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಕಾಸಸೌಧ.

****

ಸಂ. ಸಕಇ/Ed 7/CR 17/2013-14 ದಿನಾಂಕ. 29.08.2015

ಮೇಲ್ಕಂಡ ಸರ್ಕಾರಿ ಆದೇಶವನ್ನು ಎಲ್ಲಾ ಜಿ.ಸ.ಕ.ಅ ಗಳಿಗೆ ರವಾನಿಸುತ್ತಾ ಸಾರ್ವಜನಿಕ ಶಿಕ್ಷಣ ಇಲಾಖೆಯವರೊಂದಿಗೆ ... ... ಕ್ರಮ ಕೈಗೊಳ್ಳಲು ತಿಳಿಸಲಾಗಿದೆ.

ಆಯುಕ್ತರ ಪರವಾಗಿ,
ಸಮಾಜ ಕಲ್ಯಾಣ ಇಲಾಖೆ,
ಬೆಂಗಳೂರು.